ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 09ನೇ ಜುಲೈ, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಎ.ಎಸ್. ಪಾಟೀಲ್(ನಡಹಳ್ಳಿ), ಎನ್.ಹೆಚ್. ಕೋನರೆಡ್ಡಿ ಹಾಗೂ ಇತರರು ಹೈದ್ರಾಬಾದ್-ಕರ್ನಾಟಕ ಕಲಂ-371(ಜೆ) ಹಾಗೂ ಡಾ|| ಡಿ.ಎಂ. ನಂಜುಂಡಪ್ಪ ಸಮಿತಿಯ ವರದಿ ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದರಿಂದ ಉತ್ತರ ಕರ್ನಾಟಕದ 13 ಜಿಲ್ಲೆಗಳಿಗೆ ಅನ್ಯಾಯವಾಗುತ್ತಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ **ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ**.

2. ಶ್ರೀಯುತರುಗಳಾದ ಹೆಚ್.ಕೆ.ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, . ಕೆ.ಜಿ.ಬೋಪಯ್ಯ, ವಿಶ್ವೇಶ್ವರ ಹೆಗಡೆ ಕಾಗೇರಿ, ಸಿ.ಟಿ.ರವಿ ಹಾಗೂ ಇತರರು ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ ಮತ್ತು ಕಾರವಾರ ಜಿಲ್ಲೆಗಳಲ್ಲಿ ಬಿದ್ದ ಭಾರೀ ಮಳೆ ಮತ್ತು ಬಿರುಗಾಳಿಯಿಂದಾಗಿ ಬೆಳೆ ನಾಶವಾಗಿ ರೈತರಿಗೆ ಉಂಟಾಗಿರುವ ನಷ್ಟಕ್ಕೆ ಪರಿಹಾರ ನೀಡಲು ವಿಶೇಷ ಪ್ಯಾಕೇಜ್ ಘೋಷಿಸುವಂತೆ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ವೈ.ಎಸ್.ವಿ. ದತ್ತ, ಹೆಚ್.ಡಿ.ರೇವಣ್ಣ, ಡಿ.ಸಿ.ತಮ್ಮಣ್ಣ, ಎನ್.ಹೆಚ್. ಕೋನರಡ್ಡಿ ಹಾಗೂ ಇತರರು ರಾಜ್ಯದ 13 ಜಿಲ್ಲಾ ಹಾಲು ಒಕ್ಕೂಟಗಳ ವ್ಯಾಪ್ತಿಯಲ್ಲಿ 15000 ಮೆಟ್ರಿಕ್ ಟನ್ ಹಾಲಿನ ಪುಡಿ ದಾಸ್ತಾನಿರುವುದರಿಂದ ಕೋಟ್ಯಂತರ ರೂಪಾಯಿಗಳು ನಷ್ಟವಾಗುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಕೆ.ಎಸ್.ಪುಟ್ಟಣ್ಣಯ್ಯ ಮತ್ತು ಬಿ.ಬಿ.ನಿಂಗಯ್ಯ ಅವರುಗಳು ರಾಜ್ಯದ ಕಲಬುರ್ಗಿ, ಬೀದರ್, ವಿಜಯಪುರ ಹಾಗೂ ಉತ್ತರ ಕರ್ನಾಟಕದ ಇತರ ಪ್ರದೇಶಗಳಲ್ಲಿ ಅನಾವೃಷ್ಟಿಯಿಂದಾಗಿ ಉಂಟಾಗಿರುವ ತೊಂದರೆಗಳ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

ಮು.ತಿ.ನೋ.,.

2. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಯು.ಬಿ.ಬಣಕಾರ್ (ಸದಸ್ಯರು) ಅವರು:-

(i) ಹಿರೇಕೆರೂರು ತಾಲ್ಲೂಕಿನ ಪ್ರಮುಖ ಕೇಂದ್ರವಾಗಿರುವ ರಟ್ಟೀಹಳ್ಳಿ ಗ್ರಾಮಕ್ಕೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ (ಹೆಸ್ಕಾಂ) ಉಪ ವಿಭಾಗವನ್ನು ಮಂಜೂರು ಮಾಡುವ ಬಗ್ಗೆ ಹಾಗೂ

(ii) ಹಾವೇರಿ ಜಿಲ್ಲೆಯನ್ನು ನ್ಯಾಷನಲ್ ಹಾರ್ಟಿಕಲ್ಚರ್ ಬೋರ್ಡ್ (ಎನ್.ಹೆಚ್.ಬಿ) ವ್ಯಾಪ್ತಿಗೆ ಸೇರಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪ

2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಯ ಮೇಲೆ ಮುಂದುವರೆದ ಚರ್ಚೆ, ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು;

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
20	ಲೋಕೋಪಯೋಗಿ

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕ, 2015
ಶ್ರೀ ಕೃಷ್ಣ ಬೈರೇಗೌಡ (ಕೃಷಿ ರಾಜ್ಯ ಸಚಿವರು) ಅವರು;

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು;

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.,.

೫. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) ದಿನಾಂಕ 02.07.2015ರ
ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ : ಸಮಾಜ ಕಲ್ಯಾಣ ಹಾಗೂ
ಶ್ರೀ ಹೆಚ್.ಡಿ ರೇವಣ್ಣ ಅವರ ಚುಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣ
ಗುರುತಿನ ಪ್ರಶ್ನೆ ಸಂಖ್ಯೆ: 46(1104) ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಜಿ.ಬೋಪಯ್ಯ ಅವರು ಮಡಿಕೇರಿ ಜಿಲ್ಲಾ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. ಶ್ರೀ ಹೆಚ್.ಆರ್.ಅಲಗೂರು (ರಾಜು) ಅವರು ಇಂಡಿ ತಾಲ್ಲೂಕು ಚಡಚಣ ಪಟ್ಟಣವನ್ನು ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ ಅವರು ಜಿಲ್ಲಾ ಕೇಂದ್ರಗಳಿಗೆ ದೂರವಿರುವ, ಜನಸಂಖ್ಯೆ ಹಾಗೂ ಭೌಗೋಳಿಕ ವಿಸ್ತೀರ್ಣದ ಆಧಾರದ ಮೇಲೆ ಕೆಲವು ಪ್ರದೇಶಗಳನ್ನು ತಾಲ್ಲೂಕುಗಳನ್ನಾಗಿ ಘೋಷಿಸಿ, ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ಬೆಸ್ಕಾಂ ಪರಿಮಿತಿಯಲ್ಲಿ ಅಧಿಕೃತ ಪರವಾನಗಿ ಪಡೆದುಕೊಂಡು ಕಾರ್ಯನಿರ್ವಹಿಸುತ್ತಿರುವ ತುಂಡು ಗುತ್ತಿಗೆದಾರರಿಗೆ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಚನ್ನರಾಯಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ನಬಾರ್ಡ್-XX ರ ಯೋಜನೆಯಡಿ ಕಾಮಗಾರಿಗಳನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

7. ಶ್ರೀ ಪಿ. ರಾಜೀವ್ ಅವರು ರಾಯಭಾಗ ತಾಲ್ಲೂಕಿನ ಕುಡಚಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮಟ್ಕಾ ದಂಧೆಗೆ ಕಾರಣರಾದವರ ಬದಲಿಗೆ ಅಮಾಯಕರನ್ನು ಬಂಧಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8. ಶ್ರೀ ಹೆಚ್.ಎಸ್. ಶಿವಶಂಕರ್ ಅವರು ಶಿವಮೊಗ್ಗ-ಹೊಸಪೇಟೆ ರಾಜ್ಯ ಹೆದ್ದಾರಿಯನ್ನು ನಾಲ್ಕು ಪಥದ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಜಿ.ಎಸ್. ಪಾಟೀಲ್ ಅವರು ಗದಗ ಜಿಲ್ಲೆಯಲ್ಲಿ 2014-15ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಈರುಳ್ಳಿ ಬೆಳೆಗಾರರಿಗೆ ಪರಿಹಾರ ಧನ ವಿತರಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ನೀರಾವರಿ ಯೋಜನೆಗೆ ಒಳಪಟ್ಟ ತಾಲ್ಲೂಕುಗಳಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಅನುದಾನವನ್ನು ಆಯಾ ವರ್ಗಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಮೀಸಲಿಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

11. ಶ್ರೀ ಸಿದ್ದು ಬಿ. ನ್ಯಾಮಗೌಡ ಅವರು ಬಾಗಲಕೋಟೆ ಜಿಲ್ಲೆ ಜಮಖಂಡಿಯಲ್ಲಿ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

12. ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ ಅವರು ಮಹಾರಾಷ್ಟ್ರದ ಉಜನಿ ಜಲಾಯಶಯದಿಂದ ಇಂಡಿ ತಾಲ್ಲೂಕಿನ ಬರಗುಡಿ ಬ್ಯಾರೇಜಿಗೆ ನೀರು ಬಿಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಗೋವಿಂದ ಎಂ.ಕಾರಜೋಳ ಅವರು ನಿರಂತರ ಜ್ಯೋತಿ ಅಳವಡಿಕೆಯಾದ ಮೇಲೆ ರೈತರ ನೀರಾವರಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ನಿಲ್ಲಿಸಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

14. ಶ್ರೀ ಎನ್.ಹೆಚ್. ಕೋನರೆಡ್ಡಿ ಅವರು ಧಾರವಾಡ ಜಿಲ್ಲೆಯ ನವಲಗುಂದದಲ್ಲಿ ಹೋಬಳಿ ಕೇಂದ್ರ ಪ್ರಾರಂಭಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15. ಶ್ರೀ ನಾರಾಯಣಗೌಡ ಅವರು ಕೆ.ಆರ್.ಪೇಟೆ ಪಟ್ಟಣದಲ್ಲಿ ಎಂ.ಎಸ್.ಐ.ಎಲ್. ಮದ್ಯ ಮಾರಾಟ ಮಳಿಗೆ ಪ್ರಾರಂಭಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

16. ಶ್ರೀ ಭೂಸನೂರ ರಮೇಶ್ ಬಾಳಪ್ಪ ಅವರು ವಿಜಯಪುರ ಜಿಲ್ಲೆಯ ಸಿಂಧಗಿ ಕ್ಷೇತ್ರದಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಭರ್ತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

17. ಶ್ರೀ ಸಿ.ಟಿ. ರವಿ ಅವರು ಕಡೂರು ತಾಲ್ಲೂಕು ಸಖರಾಯಪಟ್ಟಣ ಮತ್ತು ಚಿಕ್ಕಮಗಳೂರು ತಾಲ್ಲೂಕು ಲಕ್ಯಾ ಹೋಬಳಿ ಕೆರೆಗಳನ್ನು ಸೇರಿಸಿ ನೀರು ತುಂಬಿಸುವ ಹಾಗೂ ಕೆರೆಗಳನ್ನು ಅಭಿವೃದ್ಧಿಗೊಳಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

18. ಶ್ರೀ ರಘುಮೂರ್ತಿ ಅವರು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ತುಂಗಾಭದ್ರಾ ಜಲಾಶಯದ ಹಿನ್ನೀರಿನಿಂದ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಪಾವಗಡ ತಾಲ್ಲೂಕುಗಳ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

19. ಶ್ರೀ ಸಂಜಯ ಬಿ.ಪಾಟೀಲ್ ಅವರು ಬೆಳಗಾವಿ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರಾರಂಭವಾಗಿರುವ ನಿರ್ಭಯ ಮಹಿಳಾ ವಿಶೇಷ ಚಿಕಿತ್ಸಾ ಘಟಕಕ್ಕೆ ಮೂಲಭೂತ ಸೌಲಭ್ಯ ಒದಗಿಸುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

20. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಶಿವಮೊಗ್ಗ ನಗರದಲ್ಲಿ ಪ್ರಾಪರ್ಟಿಕಾರ್ಡ್‌ನ್ನು ಕಡ್ಡಾಯ ಮಾಡಿರುವುದರಿಂದ ಆಸ್ತಿ ಮಾಲೀಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

21. ಶ್ರೀ ವಿ. ಸುನೀಲ್‌ಕುಮಾರ್ ಮತ್ತು ಶ್ರೀ ಬಿ.ಎನ್. ವಿಜಯಕುಮಾರ್ ಅವರುಗಳು ಬೆಂಗಳೂರು ನಗರದ ಬಳ್ಳಾರಿ ರಸ್ತೆ ಅರಮನೆ ಮೈದಾನದಲ್ಲಿ ಅನಧಿಕೃತ ಕಟ್ಟಡಗಳು ನಿರ್ಮಾಣವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

22. ಶ್ರೀ ಯು.ಬಿ.ಬಣಕಾರ ಅವರು ಹಿರೇಕೆರೂರು ತಾಲ್ಲೂಕು ಹಂಸಬಾವಿ ಹೋಬಳಿಗೆ ವಸತಿ ಶಾಲೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

23. ಶ್ರೀ ಕೆ.ಶಿವಮೂರ್ತಿ ಅವರು ಮಾಯಕೊಂಡ ಕ್ಷೇತ್ರದ ಸಾನವಳ್ಳಿ-ರಾಜನಹಳ್ಳಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕಾರ್ಯಗತಗೊಳಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

24. ಶ್ರೀಮತಿ ಶಾರದಾ ಪೂರ್ಯ ನಾಯ್ಕ್ ಅವರು ಶಿವಮೊಗ್ಗ ತಾಲ್ಲೂಕು ರೇಚಿಕೊಪ್ಪ ಕೆರೆ ಏರಿ ದುರಸ್ತಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಂ.ಕೃಷ್ಣಾರೆಡ್ಡಿ ಅವರು "ಅಕ್ರಮವಾಗಿ ಬಡಾವಣೆ ನಿರ್ಮಿಸುವ" ಬಗ್ಗೆ ದಿನಾಂಕ: 29.06.2015ರ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 59(55)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj N